**ಕರ್ನಾಟಕ ಸರ್ಕಾರ**
**ಪಂಚಾಯತ್ ರಾಜ್ ಆಯುಕ್ತಾಲಯ**
**ಕಾಳಿದಾಸ ರಸ್ತೆ, ಗಾಂಧಿನಗರ ಬೆಂಗಳೂರು – 560 009.**

ಸಂಖ್ಯೆ: ಕಪಂರಾಆ/ಅಭಿವೃದ್ಧಿ/157/2024 ದಿನಾಂಕ:29.02.2024.

**ಇವರಿಗೆ,**

ರಾಜ್ಯದ ಎಲ್ಲಾ ಜಿಲ್ಲಾ ಪಂಚಾಯಿತಿಯ
ಮುಖ್ಯ ಕಾರ್ಯನಿರ್ವಾಹಕ ಅಧಿಕಾರಿಗಳು.

ಮಾನ್ಯರೇ,

**ವಿಷಯ**: ಗ್ರಾಮ ಪಂಚಾಯಿತಿಗಳು ಸಾಮಗ್ರಿಗಳನ್ನು ನಿರ್ದಿಷ್ಟ ಏಜೆನ್ಸಿಯಿಂದ ಖರೀದಿಸುವಂತೆ ನಿರ್ದೇಶನ ನೀಡುವುದನ್ನು ತಡೆಯುವ ಕುರಿತು.

**ಉಲ್ಲೇಖ:** ಮಾನ್ಯ ಸಚಿವರು, ಗ್ರಾ.ಅ.&ಪಂ.ರಾಜ್ ಇಲಾಖೆ ರವರ ಅಧ್ಯಕ್ಷತೆಯಲ್ಲಿ ದಿನಾಂಕ:13.02.2024 ರಂದು ನಡೆದ ಸಭೆಯ ನಡವಳಿಗಳು.

****

ವಿಷಯಕ್ಕೆ ಸಂಬಂಧಿಸಿದಂತೆ, ದಿನಾಂಕ:13.02.2024 ರಂದು ಮಾನ್ಯ ಸಚಿವರು, ಗ್ರಾಮೀಣಾಭಿವೃದ್ಧಿ ಮತ್ತು ಪಂಚಾಯತ್ ರಾಜ್ ಇಲಾಖೆ ರವರು ಗ್ರಾಮ ಪಂಚಾಯಿತಿ ಸದಸ್ಯರ ಮಹಾ ಒಕ್ಕೂಟದೊಂದಿಗೆ ನಡೆಸಿದ ಸಭೆಯಲ್ಲಿ ಗ್ರಾಮ ಪಂಚಾಯಿತಿಗಳು ಸ್ವಚ್ಛತೆಗೆ ಸಂಬಂಧಿಸಿದ ಹಾಗೂ ಇನ್ನಿತರ ಸಾಮಗ್ರಿಗಳನ್ನು ಖರೀದಿಸುವಾಗ ನಿರ್ದಿಷ್ಟ ಏಜೆನ್ಸಿಗಳಿಂದ ಖರೀದಿಸುವಂತೆ ಜಿಲ್ಲಾ ಪಂಚಾಯಿತಿ ಹಾಗೂ ತಾಲ್ಲೂಕು ಪಂಚಾಯಿತಿ ಅಧಿಕಾರಿಗಳು ಒತ್ತಾಯಿಸುತ್ತಿರುವುದಾಗಿ ಗ್ರಾಮ ಪಂಚಾಯಿತಿ ಸದಸ್ಯರ ಮಹಾ ಒಕ್ಕೂಟದ ಸದಸ್ಯರುಗಳು ಆಕ್ಷೇಪವನ್ನು ವ್ಯಕ್ತಪಡಿಸಿರುತ್ತಾರೆ.

ಆದ್ದರಿಂದ, ಜಿಲ್ಲಾ ಪಂಚಾಯಿತಿ ಹಾಗೂ ತಾಲ್ಲೂಕು ಪಂಚಾಯಿತಿಗಳು ಗ್ರಾಮ ಪಂಚಾಯಿತಿಗಳಿಗೆ ಸಾಮಗ್ರಿಗಳನ್ನು ಖರೀದಿಸುವಾಗ KTPP ನಿಯಮಗಳನ್ನು ಅನುಸರಿಸದೇ, ನಿರ್ದಿಷ್ಟ ಏಜೆನ್ಸಿಗಳಿಂದ ಖರೀದಿಸುವಂತೆ ಮೌಖಿಕವಾಗಿ ಅಥವಾ ಪತ್ರದ ಮೂಲಕವಾಗಲಿ ನಿರ್ದೇಶನ ನೀಡತಕ್ಕದ್ದಲ್ಲವೆಂದು ಈ ಮೂಲಕ ತಿಳಿಸಿದೆ. ಒಂದುವೇಳೆ ಇಂತಹ ಪ್ರಕರಣಗಳು ಕಂಡುಬಂದಲ್ಲಿ, ಸಂಬಂಧಿಸಿದ ಅಧಿಕಾರಿಗಳ ವಿರುದ್ಧ ಕ್ರಮ ಕೈಗೊಳ್ಳಲಾಗುವುದು ಎಂದು ತಿಳಿಸಿದೆ.

ತಮ್ಮ ವಿಶ್ವಾಸಿ,

ಆಯುಕ್ತರು,
ಕರ್ನಾಟಕ ಪಂಚಾಯತ್ ರಾಜ್ ಆಯುಕ್ತಾಲಯ,
ಗ್ರಾಮೀಣಾಭಿವೃದ್ಧಿ ಮತ್ತು ಪಂಚಾಯತ್ ರಾಜ್ ಇಲಾಖೆ

**ಪ್ರತಿಯನ್ನು:**

1. ಮಾನ್ಯ ಸಚಿವರ ಆಪ್ತ ಕಾರ್ಯದರ್ಶಿ, ಗ್ರಾಮೀಣಾಭಿವೃದ್ಧಿ ಮತ್ತು ಪಂಚಾಯತ್ ರಾಜ್ ಇಲಾಖೆ, ವಿಕಾಸ ಸೌಧ, ಬೆಂಗಳೂರು.
2. ಸರ್ಕಾರದ ಅಪರ ಮುಖ್ಯ ಕಾರ್ಯದರ್ಶಿ (ಪಂರಾಜ್) ರವರ ಆಪ್ತ ಕಾರ್ಯದರ್ಶಿ, ಗ್ರಾಮೀಣಾಭಿವೃದ್ಧಿ ಮತ್ತು ಪಂಚಾಯತ್ ರಾಜ್ ಇಲಾಖೆ, ಬಹುಮಹಡಿಗಳ ಕಟ್ಟಡ, ಬೆಂಗಳೂರು.
3. ಆಯುಕ್ತರು, ಕರ್ನಾಟಕ ಪಂಚಾಯತ್ ರಾಜ್ ಆಯುಕ್ತಾಲಯ ರವರ ಆಪ್ತ ಸಹಾಯಕರು, ಬೆಂಗಳೂರು.

4. ಕರ್ನಾಟಕ ರಾಜ್ಯ ಗ್ರಾಮ ಪಂಚಾಯಿತಿ ಸದಸ್ಯರ ಮಹಾ ಒಕ್ಕೂಟ ನಂ.5, 2ನೇ ಅಡ್ಡರಸ್ತೆ, ಎನ್.ಎಸ್.ಅಯ್ಯಂಗಾರ್ ರಸ್ತೆ, ಶೇಷಾದ್ರಿಪುರಂ, ಬೆಂಗಳೂರು. -560020,
5. ಶಾಖಾ ರಕ್ಷಾ ಕಡತಕ್ಕೆ /ಹೆಚ್ಚುವರಿ ಪ್ರತಿ.